# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** 881
**ಮಾನ್ಯ ಸದಸ್ಯರ ಹೆಸರು** ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆ ಕ್ಷೇತ್ರದಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** 28-9-2020
**ಉತ್ತರಿಸುವ ಸಚಿವರು** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ 100 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಸರ್ಕಾರಿ ಆಸ್ಪತ್ರೆಯ ಹೆಚ್ಚುವರಿ ಕಟ್ಟಡವನ್ನು ನಿರ್ಮಿಸಲು ಶಂಕು ಸ್ಥಾಪನೆ ನೆರವೇರಿಸಲಾಗಿತ್ತೆ; | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ 100 ಕೋಟಿ ರೂಪಾಯಿಗಳ ವೆಚ್ಚದಲ್ಲಿ 450 ಹಾಸಿಗೆಯ ಹೆಚ್ಚುವರಿ ಆಸ್ಪತ್ರೆ ಕಟ್ಟಡ ನಿರ್ಮಿಸಲು ದಿನಾಂಕ:27-1-2020 ರಂದು ಶಂಕು ಸ್ಥಾಪನೆಯನ್ನು ನೆರವೇರಿಸಲಾಗಿರುತ್ತದೆ. |
| 2 | ಹಾಗಿದ್ದಲ್ಲಿ, ಸದರಿ ಕಟ್ಟಡ ಕಾಮಗಾರಿಗೆ ಹಣ ಬಿಡುಗಡೆ ಮಾಡಲಾಗಿದೆಯೇ: ಇದುವರೆಗೂ ಎಷ್ಟು ಹಣ ಬಿಡುಗಡೆಯಾಗಿದೆ; | ಸದರಿ ಕಟ್ಟಡ ಕಾಮಗಾರಿಗೆ ಇದುವರೆಗೂ ರೂ. 10.00 ಕೋಟಿ ಬಿಡುಗಡೆಯಾಗಿದೆ. |
| 3 | ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗು ವುದು? | ಹೊಸ ಆಸ್ಪತ್ರೆ ಕಟ್ಟಡ ನಿರ್ಮಿಸುವ ಉದ್ದೇಶಿತ ಜಾಗದಲ್ಲಿ ಹಳೆ ಕಟ್ಟಡಗಳಿದ್ದು, ಸದರಿ ಕಟ್ಟಡಗಳನ್ನು ನೆಲಸಮ ಮಾಡಿ ಅವಶೇಷಗಳನ್ನು ತೆರವುಗೊಳಿಸಿ ವಿಲೇವಾರಿ ಮಾಡಿ ಜಾಗವನ್ನು ಸಮತಟ್ಟು ಮಾಡಲಾಗಿರುತ್ತದೆ.<br>ಸದರಿ ಕಾಮಗಾರಿಯನ್ನು ಕೈಗೊಂಡು ಮುಕ್ತಾಯಗೊಳಿಸಲು ಗುತ್ತಿಗೆ ಕರಾರಿನಲ್ಲಿ 24 ತಿಂಗಳು ಕಾಲಾವಧಿಯನ್ನು ನಿಗದಿಪಡಿಸಲಾಗಿರುತ್ತದೆ. |

**ಆಕುಕ 129 ಎಸ್.ಎಂ.ಎಂ. 2020**

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು